**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ರವರ ನ್ಯಾಯಾಲಯ, ನಂಜನಗೂಡು**

**ಸಿಸಿ ಸಂಖ್ಯೆ**: 750/2018

**ಫಿರ್ಯಾದುದಾರರು** : ಸರ್ಕಾರದ ಪರವಾಗಿ ಆರಕ್ಷಕ ಉಪ-ನಿರೀಕ್ಷಕರು,
ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ,
ನಂಜನಗೂಡು.

ವಿರುದ್ಧ

**ಆರೋಪಿಗಳು** : ಶ್ರೀ.ಪುಟ್ಟಸ್ವಾಮಿ ಮತ್ತು ಇನ್ನೊಬ್ಬರು

:: ದೋಷಾರೋಪಣೆ ::

**ಶ್ರೀ ಸತೀಶ ಕೆ.ಜಿ., ಬಿ.ಎ., ಎಲ್.ಎಲ್.ಬಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ. ನಂಜನಗೂಡು ಆದ ನಾನು ಆರೋಪಿಗಳಾದ-

1) ಶ್ರೀ.ಪುಟ್ಟಸ್ವಾಮಿ ಬಿನ್ ಲೇಟ್ ಮಲಿಯಯ್ಯ,
ವಯಸ್ಸು ಸುಮಾರು 58 ವರ್ಷ,

2) ಶ್ರೀಮತಿ.ಚಿನ್ನಮ್ಮ ಕೋಂ ಲೇಟ್ ಮಲಿಯಯ್ಯ,
ವಯಸ್ಸು ಸುಮಾರು 74 ವರ್ಷ,

ನಂಜನಗೂಡು ತಾಲ್ಲೂಕಿನ ಸಿಂಧುವಳ್ಳಿಪುರ ಗ್ರಾಮದ ನಿವಾಸಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ-

ಮೊದಲನೆಯದಾಗಿ ದಿನಾಂಕ 06.04.2018 ರಂದು ಸಂಜೆ 05.30 ಗಂಟೆ ಸಮಯದಲ್ಲಿ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಸಿಂಧುವಳ್ಳಿಪುರ ಗ್ರಾಮದಲ್ಲಿ ವಾಸವಾಗಿರುವ ಚಾಸಾ-1-ಶ್ರೀಮತಿ.ಶಿವಮ್ಮರವರು ತಮ್ಮ ಗಂಡ-1 ನೇ ಆರೋಪಿಯಾದ ನಿಮ್ಮನ್ನು ಉದ್ದೇಶಿಸಿ ನಿಮ್ಮ ತಮ್ಮ ಶ್ರೀ.ಲೋಕೇಶ ಪ್ರತಿ ದಿನ ಕುಡಿದು ಬಂದು ವಿನಾ ಕಾರಣ ಅವಾಚ್ಯ ಶಬ್ದಗಳಿಂದ ಅಕ್ಕಪಕ್ಕದ ಮನೆಯವರನ್ನು ಬೈಯುತ್ತಿರುತ್ತಾರೆ ಸ್ವಲ್ಪ ಬುದ್ದಿ ಹೇಳಿ ಎಂದು ಹೇಳಿದ್ದಕ್ಕೆ , 1 ನೇ ಆರೋಪಿಯಾದ ನೀವು ಚಾಸಾ-1 ರವರನ್ನು ಉದ್ದೇಶಿಸಿ ನಮ್ಮ ಫ್ಯಾಮಿಲಿ ಹಾಗೆ ನೀನು ಏನೂ ಕೇಳುವುದು ಎಂದು ಮನೆಯಲ್ಲಿದ್ದ ಮಾರಕಾಯುಧವಾದ ಮರದ ಹಿಟ್ಟಿನ ದೊಣ್ಣೆಯಿಂದ ಚಾಸಾ-1 ರವರ ತಲೆಯ ನೆತ್ತಿಗೆ ಸ್ವ-ಇಚ್ಛೆಯಿಂದ ಹಲ್ಲೆ ಮಾಡಿ ಸಾಮಾನ್ಯ ಸ್ವರೂಪದ ಗಾಯವನ್ನುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಎರಡನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 2 ನೇ ಆರೋಪಿಯಾದ ನೀವು ಚಾಸಾ–1 ರವರನ್ನು ಉದ್ದೇಶಿಸಿ "ಬೋಳಿ ಮಗಳೆ, ಸೂಳೆ ಮಗಳೆ" ಎಂದು ಅವಾಚ್ಯ ಶಬ್ದಗಳಿಂದ ಬೈದಿದ್ದು, ಆ ಮೂಲಕ ಚಾಸಾ–1 ರವರಿಗೆ ಉದ್ರೇಕವನ್ನುಂಟು ಮಾಡಿದರೆ ಅಂತಹ ಉದ್ರೇಕದಿಂದ ಅವರು ಕುಪಿತರಾಗಿ ಶಾಂತಿಭಂಗವನ್ನುಂಟು ಮಾಡಲೆಂಬ ಅಥವಾ ಯಾವುದೇ ಅಪರಾಧವನ್ನು ಮಾಡಬೇಕೆಂಬ ಉದ್ದೇಶದಿಂದ ಅವರನ್ನು ಅವಮಾನಪಡಿಸಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಮೂರನೆಯದಾಗಿ, ಮೇಲೆ ಹೇಳಿದ ದಿನಾಂಕ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಚಾಸಾ–1 ರವರ ಜೊತೆ ಜಗಳ ತೆಗೆದು, ಆರೋಪಿಗಳ ಪೈಕಿ 2 ನೇ ಆರೋಪಿಯಾದ ನೀವು ಕೈಗಳಿಂದ ಚಾಸಾ–1 ರವರ ಮೈಕೈಗೆ ಸ್ವ–ಇಚ್ಛೆಯಿಂದ ಹಲ್ಲೆ ಮಾಡಿ ನೋವುಂಟು ಮಾಡಿದ್ದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ಸಹವಾಚಕ 34 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಎಸಗಿರುವಿರಿ.

ಪ್ರಶ್ನೆ:1– ಈ ಮೇಲೆ ಹೇಳಿದಂತೆ ನಿಮಗೆ ಓದಿ ಹೇಳಿ ವಿವರಿಸಿದ ದೋಷಾರೋಪಣೆಯನ್ನು ಅರ್ಥಮಾಡಿಕೊಂಡಿರುವಿರಾ?

1 ಮತ್ತು 2 ನೇ ಆರೋಪಿಗಳ ಉತ್ತರಃ

ಪ್ರಶ್ನೆ:2– ಸದರಿ ಆರೋಪಣೆಗಳನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗಬೇಕೋ?

1 ಮತ್ತು 2 ನೇ ಆರೋಪಿಗಳ ಉತ್ತರಃ

(ಆರೋಪಿಗಳಿಗೆ ತಿಳಿದಿರುವ ಕನ್ನಡ ಭಾಷೆಯಲ್ಲಿ ಈ ದೋಷಾರೋಪಣೆಯನ್ನು ಓದಿ ತಿಳಿಸಿ ಹೇಳಲಾಗಿ ಸದರಿ ಆರೋಪಿಗಳು ಹೇಳಿದ ಉತ್ತರಗಳನ್ನು ಯಥಾವತ್ತಾಗಿ ಬರೆದುಕೊಳ್ಳಲಾಯಿತ್ತೆಂದು ದೃಢೀಕರಿಸಿರುತ್ತೇನೆ.)

ದಿನಾಂಕಃ 04.08.2025.

(ಸತೀಶ. ಕೆ.ಜಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ನಂಜನಗೂಡು.